## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162, ಗಿರಿನಗರ, ಬೆಂಗಳೂರು.

### ಏಪ್ರಿಲ್ ಮಾಹೆಯ 1ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 20-03-2021 ರಂದು ವಾರ್ಡ್ ಸಂಖ್ಯೆ: 162, ಗಿರಿನಗರದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

*****

ದಿನಾಂಕ: 03-04-2021
ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕನಂದ ಉದ್ಯಾನವನ, ಗಿರಿನಗರ
ಸಮಯ : ಪೂರ್ವಾಹ್ನ 9.30 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಡಾ. ಹೆಚ್.ಎನ್ ರಘು | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ಜನಾರ್ಧನ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಗಿರಿನಗರ) ಉಪವಿಭಾಗ |
| 3 | ಶ್ರೀ ಶಿಲ್ಪಶ್ರೀ ಬಿ.ಜೆ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ |
| 4 | ಶ್ರೀ ಪ್ರಶಾಂತ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಬೆಸ್ಕಾಂ) |
| 5 | ಶ್ರೀ ಶ್ರೀಧರ್ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 6 | ಶ್ರೀ ಚಂದ್ರಶೇಖರ್ | ಕಂದಾಯ ಪರಿವೀಕ್ಷಕರು |
| 7 | ಶ್ರೀ ಭೂದೇವಿ | ತೋಟಗಾರಿಕೆ ಇಲಾಖೆ |
| 8 | ಶ್ರೀ ಲಕ್ಷ್ಮೀದೇವಿ | ಕಿರಿಯ ಅಭಿಯಂತರರು (ಬೆಸ್ಕಾಂ) |
| 9 | ಶ್ರೀಮತಿ. ಉಷಾ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಡಾ. ಹೆಚ್.ಎನ್ ರಘು ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ವಾರ್ಡ್‌ನಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆಯವರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಜನಸಂದಣಿ ಪ್ರದೇಶಗಳಲ್ಲಿ ಸಾರ್ವಜನಿಕ ಸಾಮಾಜಿಕ ಅಂತರ (Social Distance) ಕಾಪಾಡಿಕೊಳ್ಳುವುದು ಹಾಗೂ ಮಾಸ್ಕ ಧರಿಸುವುದರ ಬಗ್ಗೆ ಅರಿವು ಮೂಡಿಲು ಹಾಗೂ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.

2. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಉದ್ಯಾನವನಗಳಲ್ಲಿ ಸಾರ್ವಜನಿಕರು ವಾಕಿಂಗ್ ಮಾಡುವ ಸಂದರ್ಭದಲ್ಲಿ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳಲು ಅರಿವು ಮೂಡಿಸಲು ಮಾರ್ಷಲ್‌ಗಳಿಗೆ ತಿಳಿಸಲಾಯಿತು. ಮಾಸ್ಕ್ ಧರಿಸದಿರುವವರಿಗೆ ದಂಡ ವಿಧಿಸಲು ತಿಳಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಜಾಸ್ತಿಯಾಗುತ್ತಿರುವ ಹಿನ್ನೆಲೆಯಲ್ಲಿ ಸಂಚಾರಿ ಟೆಸ್ಟಿಂಗ್ ಸೆಂಟರ್‌ನ್ನು (ಮೊಬೈಲ್ ಯೂನಿಟ್) ಅಳವಡಿಸಿ ಹೆಚ್ಚು ಸಂಖ್ಯೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸಮರ್ಪಕವಾಗಿ ನಿರ್ವಹಿಸಲು ಹಿರಿಯ ಆರೋಗ್ಯ ಪರಿವೀಕ್ಷಕರು ಸೂಚಿಸಲಾಗಿರುತ್ತದೆ.

4. ವಾರ್ಡ್ ವ್ಯಾಪ್ತಿಯಲ್ಲಿ ಇರುವ ಕಸದ ಗುಡ್ಡೆಗಳನ್ನು ತೆರವುಗೊಳಿಸಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ಮೇಲ್ವಿಚಾರಕರಿಗೆ ಸೂಚಿಸಿರುತ್ತಾರೆ.

5. ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯವರು Tree trimming ಮಾಡಿದ ಮರದ ಕಸವನು ಬೆಸ್ಕಾಂ ಇಲಾಖೆಯವರೆ ತೆರುವುಗೂಳಿಸಬೇಕೆಂದು ತಿಳಿಸಲಾಯಿತು.

6. ವಾರ್ಡ್ ವ್ಯಾಪ್ತಿಯಲ್ಲಿನ ಉದ್ಯಾನವನಗಳಲ್ಲಿ ದೀಪಗಳನ್ನು ನಿರ್ವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ವಾರ್ಡ್ ಕಾರ್ಯದರ್ಶಿರವರಿಗೆ ಮಾನ್ಯ ಅಧ್ಯಕ್ಷರು ತಿಳಿಸಿರುತ್ತಾರೆ.

7. ಬೆಂಗಳೂರು ಜಲ ಮಂಡಳಿ ವತಿಯಿಂದ ರಸ್ತೆ ಅಗೆತಗಳನ್ನು ಸರಿಪಡಿಸಲು ಸೂಚಿಸಿರುತ್ತಾರೆ ಹಾಗೂ ತಮ್ಮ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಮತ್ತು ಪ್ರಗತಿಯಲ್ಲಿರುವ ಕಾಮಗಾರಿಗಳ ವಿವರಗಳನ್ನು ಮುಂದಿನ ಸಭೆಯಲ್ಲಿ ಹಾಜರುಪಡಿಸಲು ತಿಳಿಸಲಾಗಿರುತ್ತದೆ.

8. ವಾರ್ಡ್ ವ್ಯಾಪ್ತಿಯಲ್ಲಿ ಆರೋಗ್ಯ ವೈದ್ಯಾಧಿಕಾರಿಗಳು ಪ್ರತಿ ದಿನ ಸುಮಾರು 80 ಕೋವಿಡ್-19 ಪರೀಕ್ಷೆಗಳನ್ನು ಮಾಡಿರುತ್ತಾರೆ. ಪಾಸಿಟಿವ್ ಪ್ರಕರಣಗಳು ಪತ್ತೆಯಾಗಿದ್ದಲ್ಲಿ ಅವುಗಳಿಗೆ ಟ್ರಾವೆಲ್ ಹಿಸ್ಟರಿ ಇರುತ್ತದೆ ಹಾಗೂ ಪಾಲಿಕೆ ಆಸ್ಪತ್ರೆಗಳಲ್ಲಿ ಕೋವಿಡ್-19 ಲಸಿಕೆ ನೀಡುವ ಕಾರ್ಯಕ್ರಮವು ಸಮರ್ಪಕವಾಗಿ ನಡೆಯುತ್ತಿದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

9. ವಾರ್ಡ್ ವ್ಯಾಪ್ತಿಯ ಹೋಟೆಲ್ / ರೆಸ್ಟೋರೆಂಟ್‌ಗಳಲ್ಲಿ ಬಳಸಿ ಎಸೆಯುವ ಪ್ಲೇಟ್ ಮತ್ತು ಗ್ಲಾಸ್‌ಗಳನ್ನು ಉಪಯೋಗಿಸಲು ಹಾಗೂ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳಲು ಅರಿವು ಮೂಡಿಸಲು ಮಾರ್ಷಲ್‌ಗಳಿಗೆ ತಿಳಿಸಲಾಯಿತು.

10. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮದುವೆ ಮಂಟಪಗಳಿಗೆ ಬರುವಂತಹ ಜನರ ಬಗ್ಗೆ ಮಾಹಿತಿ ಪಡೆಯುವ ಸಲುವಾಗಿ ರಿಜಿಸ್ಟರ್‌ನ್ನು ನಿರ್ವಹಣೆ ಮಾಡಲು ಹಾಗೂ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳಲು ಅರಿವು ಮೂಡಿಸಲು ಮಾರ್ಷಲ್‌ಗಳಿಗೆ ತಿಳಿಸಲಾಯಿತು.

11. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪಾದಚಾರಿ ಮಾರ್ಗದಲ್ಲಿ ವ್ಯಾಪಾರ ವಹಿವಾಟುಗಳನ್ನು ತೆರವುಗೊಳಿಸಲು ಕ್ರಮವಹಿಸುವಂತೆ ಮಾರ್ಷಲ್‌ಗಳಿಗೆ ತಿಳಿಸಲಾಯಿತು.

12. ವಾರ್ಡ್ ವ್ಯಾಪ್ತಿಯ ಪ್ರದೇಶಗಳಲ್ಲಿ ಎಂ.ಸಿ ಗ್ಯಾಂಗ್‌ಮನ್‌ಗಳ ಮೂಲಕ ಸ್ಯಾನಿಟೈಸರ್ ಸಿಂಪಡಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಕ್ರಮವಹಿಸುವಂತೆ ಸಭೆಯಲ್ಲಿ ತಿಳಿಸಲಾಯಿತು.

13. ವಾರ್ಡ್ ವ್ಯಾಪ್ತಿಯಲ್ಲಿ ನಿರ್ಮಿಸುತ್ತಿರುವ ಕಟ್ಟಡಗಳಲ್ಲಿ ಕೂಲಿ ಕಾರ್ಮಿಕರಿಗೆ ಸ್ಯಾನಿಟೈಸರ್ ಮೂಲಕ ಕೈಗಳನ್ನು ಸ್ವಚ್ಛಗೊಳಿಸುವುದು ಮತ್ತು ಮಾಸ್ಕ್ ಧರಿಸುವುದರ ಬಗ್ಗೆ ಅರಿವು ಮೂಡಿಸಲು ಸಭೆಯಲ್ಲಿ ಹಾಜರಿದ ಸಹಾಯಕ ಅಭಿಯಂತರರು ಇವರಿಗೆ ತಿಳಿಸಲಾಯಿತು.

14. ವಾರ್ಡ್ ವ್ಯಾಪ್ತಿಯಲ್ಲಿ ತೋಟಗಾರಿಕೆ ಇಲಾಖೆಗೆ ಸಂಬಂಧಪಟ್ಟಂತೆ ಈ ಹಿಂದೆ ನಡೆದ ಸಭೆಯ ನಡಾವಳಿಗಳ ಬಗ್ಗೆ ಕ್ರಮವಹಿಸಿರುವಂತೆ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಸಭೆಯಲ್ಲಿ ತಿಳಿಸಲಾಯಿತು.

15. ವಾರ್ಡ್ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆ ಹಾಗೂ ಕಸ ಬೇರ್ಪಡಿಸುವ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸಭೆಯಲ್ಲಿ ತಿಳಿಸಿರುತ್ತಾರೆ.

16. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಅಗೆತಗಳನ್ನು ಕಾಮಗಾರಿ ಇಲಾಖೆಯಿಂದ ನಿರ್ವಹಿಸುತ್ತಿದ್ದು, ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ತುರ್ತಾಗಿ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿಯವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

06/04/2021
ಕಾರ್ಯದರ್ಶಿಗಳು
ಹಾಗೂ ಕಿರಿಯ ಅಭಿಯಂತರರು
ವಾರ್ಡ್ ಸಂಖ್ಯೆ: 162, ಗಿರಿನಗರ

06/04/2021
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 162, ಗಿರಿನಗರ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
8. ಕಛೇರಿ ಪ್ರತಿ.